(466)

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 376 (466) |
| ಸದಸ್ಯರ ಹೆಸರು | : | ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 19-02-2024 |
| ಉತ್ತರಿಸುವ ಸಚಿವರು | : | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಜಿಲ್ಲೆ ಖಾನಾಪೂರ ತಾಲ್ಲೂಕಿನಲ್ಲಿ ಹೈನುಗಾರಿಕೆಯನ್ನು ಮೂಲ ಕಸುಬನ್ನಾಗಿ ಮಾಡಿಕೊಂಡು ಸ್ವಾತಂತ್ರ್ಯ ಪೂರ್ವದಿಂದಲೂ ಅರಣ್ಯ ಪ್ರದೇಶದಲ್ಲಿ ವಾಸಿಸುವ ಧನಗರ ಗೌಳಿ ಜನಾಂಗದ ಸುಮಾರು 20 ಕ್ಕೂ ಹೆಚ್ಚು ಹಳ್ಳಿಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಹಳ್ಳಿಗಳು ಇಂದಿಗೂ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದ್ದು, ಈ ಹಳ್ಳಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮವಹಿಸುವುದೇ? | ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲೂಕಿನ ವ್ಯಾಪ್ತಿಯಲ್ಲಿ 34 "ಗೌಳಿವಾಡಾ"ಗಳು ಇರುತ್ತವೆ. ಅವುಗಳ ಪೈಕಿ 14 ಗೌಳಿವಾಡಾಗಳು ಅರಣ್ಯ ಪ್ರದೇಶದಲ್ಲಿ ಅನಧಿಕೃತವಾಗಿ ವಾಸವಾಗಿರುತ್ತವೆ ಹಾಗೂ 20 ಗೌಳಿವಾಡಾಗಳು ಅರಣ್ಯೇತರ ಪ್ರದೇಶದಲ್ಲಿ ವಾಸವಾಗಿರುತ್ತವೆ.<br><br>ಅರಣ್ಯ ಪ್ರದೇಶದಲ್ಲಿ ವಾಸವಾಗಿರುವ 14 ಅನಧಿಕೃತ ಗೌಳಿವಾಡಾಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.<br><br>ಆದರೆ, ಅರಣ್ಯೇತರ ಪ್ರದೇಶದಲ್ಲಿ ವಾಸವಾಗಿರುವ 20 ಗೌಳಿವಾಡಾಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅರಣ್ಯ ಪ್ರದೇಶದ ಅವಶ್ಯಕತೆ ಇದ್ದಲ್ಲಿ ಅಂದರೆ ಕುಡಿಯುವ ನೀರು ಪೂರೈಕೆ, ವಿದ್ಯುತ್ ಸಂಪರ್ಕ ನೀಡುವುದು, ರಸ್ತೆ ನಿರ್ಮಾಣ ಇತ್ಯಾದಿ ಮೂಲಭೂತ ಸೌಕರ್ಯಗಳಿಗೆ ಸಂಬಂಧಿಸಿದ ಇಲಾಖೆಗಳು ಅಥವಾ ಉಪಯೋಗಿ ಸಂಸ್ಥೆಯವರು ಅರಣ್ಯ ಪ್ರದೇಶವನ್ನು ಅರಣ್ಯೇತರ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಅರಣ್ಯ (ಸಂರಕ್ಷಣಾ) ಕಾಯ್ದೆ-1980 ರಡಿ ಪೂರ್ವಾನುಮತಿ ಪಡೆದುಕೊಳ್ಳುವುದು ಅವಶ್ಯಕವಾಗಿರುತ್ತದೆ. |

ಸಂಖ್ಯೆ: ಎಫ್‌ಇಇ 84 ಎಫ್‌ಎಲ್‌ಎಲ್ 2024 (ಇ)

(ಈಶ್ವರ ಬಿ ಖಂಡ್ರೆ)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

ಈಶ್ವರ ಬಿ. ಖಂಡ್ರೆ
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು